# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 291 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ. ಪ್ರತಾಪಸಿಂಹ ನಾಯಕ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 15/02/2024 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಕಾರ್ಮಿಕರಿಗೆ ನೀಡಲಾಗುತ್ತಿರುವ ವೈದ್ಯಕೀಯ ಸಹಾಯಧನ, ಪ್ರಮುಖ ಖಾಯಿಲೆಗಳ ಚಿಕಿತ್ಸಾ ವೆಚ್ಚ ಹಾಗೂ ಅಪಘಾತ ಚಿಕಿತ್ಸಾ ವೆಚ್ಚದ ವಿವರಗಳೇನು; (ಸಂಪೂರ್ಣ ವಿವರಗಳನ್ನು ಒದಗಿಸುವುದು) | ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಹಾಗೂ ಅವರ ಅವಲಂಭಿತರಿಗೆ ಈ ಕೆಳಕಂಡಂತೆ ವೈದ್ಯಕೀಯ ಸಹಾಯಧನ, ಪ್ರಮುಖ ವೈದ್ಯಕೀಯ ವೆಚ್ಚ ಹಾಗೂ ಅಪಘಾತ ಪರಿಹಾರ ಧನ ಸಹಾಯ ನೀಡಲಾಗುತ್ತಿದೆ:<br><br>1. **ವೈದ್ಯಕೀಯ ಸಹಾಯ ಧನ (ಕಾರ್ಮಿಕ ಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ **ರೂ. 300/- ರಿಂದ ರೂ. 20,000/-**ವರೆಗೆ<br><br>2. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ**): ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತಚಿಕಿತ್ಸೆ, ಗರ್ಭಕೋಶ ಶಸ್ತಚಿಕಿತ್ಸೆ, ಅಸ್ತಮಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರಪಿಂಡದಲ್ಲಿನ ಕಲ್ಲುತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ , ಕಿಡ್ನಿಶಸ್ತ್ರ ಚಿಕಿತ್ಸೆ, ಇ.ಎನ್.ಟಿ ಚಿಕಿತ್ಸೆ, ಶಸ್ತ್ರ ಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆ, ಕರುಳಿನ ಶಸ್ತಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆಮುರಿತ/ ಡಿಸ್‌ಲೊಕೇಶನ್ ಚಿಕಿತ್ಸೆ, ಇತರೆ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-ವರೆಗೆ** |

| | | |
|---|---|---|
| | | 3. **ಅಪಘಾತ ಪರಿಹಾರ:** ನೊಂದಾಯಿತ ಕಟ್ಟಡ ಕಾರ್ಮಿಕರು ಮರಣ ಹೊಂದಿದ್ದಲ್ಲಿ **ರೂ. 5,00,000/-**ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ. 2,00,000/-** |
| ಆ) | ಸದರಿ ಚಿಕಿತ್ಸಾ ವೆಚ್ಚಗಳನ್ನು ಅವೈಜ್ಞಾನಿಕವಾಗಿ ಅತೀ ಕಡಿಮೆ ನಿಗದಿ ಮಾಡಿರುವುದು ಮತ್ತು ಮರುಪಾವತಿ ಮಾಡುವಲ್ಲಿ ಸಾಕಷ್ಟು ವ್ಯತ್ಯಯ ಮತ್ತು ವಿಳಂಬವಾಗುತ್ತಿರುವುದರಿಂದ, ಕಾರ್ಮಿಕರು ಸಂಕಷ್ಟಕ್ಕೀಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗದ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕರ್ನಾಟಕ ನಿಯಮ, 2006ರನ್ವಯ ಮಂಡಳಿಯಿಂದ ವೈದ್ಯಕೀಯ ವೆಚ್ಚ ಮರುಪಾವತಿಗಾಗಿ ಕೇಂದ್ರ ಸರ್ಕಾವು ಸಿ.ಜಿ.ಹೆಚ್.ಎಸ್ ನಿಯಮಗಳನ್ವಯ ನಿಗಧಿಪಡಿಸಿದ ದರಗಳನ್ನು ಅನ್ವಯಿಸಿಕೊಳ್ಳಲಾಗುತ್ತಿದೆ. ಫಲಾನುಭವಿಗಳ ವೈದ್ಯಕೀಯ ವೆಚ್ಚ ಮರುಪಾವತಿ ಅರ್ಜಿಗಳನ್ನು ವಿಲೇವಾರಿ ಮಾಡಲು ಸಕಾಲ ನಿಯಮಗಳಡಿ ಕಾಲಮಿತಿಯನ್ನು ನಿಗಧಿಪಡಿಸಲಾಗಿದ್ದು, ಇದರನ್ವಯ ಅರ್ಜಿಗಳನ್ನು ಸಕಾಲದಲ್ಲಿ ವಿಲೇವಾರಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ. |
| ಇ) | ಬಂದಿದ್ದಲ್ಲಿ, ಈ ಸಂಬಂಧ ಕಾರ್ಮಿಕರಿಗೆ ನ್ಯಾಯ ಒದಗಿಸಲು ಸರ್ಕಾರ ಇದುವರೆಗೆ ಕೈಗೊಂಡ ಕ್ರಮಗಳೇನು; | ಅನ್ವಯವಾಗುವುದಿಲ್ಲ |
| ಈ | ವೈದ್ಯಕೀಯ ಸಹಾಯಧನ, ಪ್ರಮುಖ ಖಾಯಿಲೆಗಳ ಚಿಕಿತ್ಸಾ ವೆಚ್ಚ ಹಾಗೂ ಅಪಘಾತ ಚಿಕಿತ್ಸಾ ವೆಚ್ಚವನ್ನು ಪೂರ್ಣವಾಗಿ ಕಾರ್ಮಿಕರಿಗೆ ಪಾವತಿಸಲು ಅಥವಾ ನಗದು ರಹಿತ ವೈದ್ಯಕೀಯ ಚಿಕಿತ್ಸಾ ಸೇವೆಯನ್ನು ಜಾರಿ ಮಾಡಲು ಸರ್ಕಾರ ಕೂಡಲೇ ಕ್ರಮವಹಿಸುವುದೇ? | ನಗದು ರಹಿತ ವೈದ್ಯಕೀಯ ಚಿಕಿತ್ಸಾ ಸೇವೆಯನ್ನು ಜಾರಿ ಮಾಡುವ ಯಾವುದೇ ಪ್ರಸ್ತಾವನೆ ಪ್ರಸ್ತುತ ಮಂಡಳಿಯಲ್ಲಿ ಇರುವುದಿಲ್ಲ. |

**ಕಾಇ 105 ಎಲ್ ಇಟಿ 2024**

**(ಸಂತೋಷ್ ಎಸ್. ಲಾಡ್)**
**ಕಾರ್ಮಿಕ ಸಚಿವರು**